ಓ.ಎಸ್.ನಂ.190-2022

ಪಿ.ಡಬ್ಲು-೧

ದಿ: 25.09.2025 ರಂದು ವಾದಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ : ವಾದಿ ಪರವಾಗಿ ಶ್ರೀಯುತ ಕೆ.ಆರ್.ಎ ವಕೀಲರಿಂದ.

ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ಸತ್ಯವಾಗಿರುತ್ತವೆ ಮತ್ತು ಸದರಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ದಿ: 18.01.2019 ರಂದು ಪ್ರತಿವಾದಿಯು ಬರೆದುಕೊಟ್ಟ ಕ್ರಯದ ಕರಾರು ಪತ್ರವನ್ನು ಹಾಜರುಪಡಿಸಿದ್ದು ನಿಪಿ.1 ಎಂದು, ನಿಪಿ.1 ರಲ್ಲಿನ ವಾದಿಯ ನಾಲ್ಕು ಸಹಿಗಳನ್ನು ಸಾಕ್ಷಿ ನೋಡಿ ಗುರುತಿಸಿದ ಮೇರೆಗೆ ಅವುಗಳನ್ನು ಒಟ್ಟಾಗಿ ನಿಪಿ.1(ಎ) ಎಂದು, ನಿಪಿ.1 ರಲ್ಲಿನ ಪ್ರತಿವಾದಿಯ ಆರು ಸಹಿಗಳನ್ನು ಸಾಕ್ಷಿ ನೋಡಿ ಗುರುತಿಸಿದ ಮೇರೆಗೆ ಅವುಗಳನ್ನು ಒಟ್ಟಾಗಿ ನಿಪಿ.1(ಬಿ) ಎಂದು, ನಿಪಿ.1 ಕ್ರಯದ ಕರಾರು ಪತ್ರದ ಕೊರತೆ ಮುದ್ರಾಂಕ ಶುಲ್ಕ ಪಾವತಿಸಿದ ರಸೀದಿಯನ್ನು ನಿಪಿ.2 ಎಂದು, ದಿ: 08.03.2021 ರಂದು ವಕೀಲರ ಮೂಲಕ ಪ್ರತಿವಾದಿಗೆ ನೀಡಿದ ನೋಟಿಸ್ಸಿನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ನಿಪಿ.3 ಎಂದು, ನಿಪಿ.3 ಪ್ರತಿವಾದಿಗೆ ಕಳುಹಿಸಿದ ಕುರಿತು ಅಂಚೆ ರಸೀದಿಯನ್ನು ಹಾಜರುಪಡಿಸಿದ್ದು ನಿಪಿ.4 ಎಂದು, ನಿಪಿ.3 ಪ್ರತಿವಾದಿಗೆ ಜಾರಿಯಾದ ಕುರಿತು ಅಂಚೆ ಸ್ವಿಕೃತಿ ಪತ್ರವನ್ನು ಹಾಜರುಪಡಿಸಿದ್ದು ನಿಪಿ.5 ಎಂದು, ಮಾರಸಂದ್ರಹಳ್ಳಿ ಗ್ರಾಮದ ಆಸ್ತಿ ಸಂಖ್ಯೆ 74 ಆಸ್ತಿಯ ನಮೂನೆ 11(ಬಿ) ನ್ನು ಹಾಜರುಪಡಿಸಿದ್ದು ನಿಪಿ.6 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

ಓ.ಹೇ.ಕೇ.ಸ.ಇದೆ.

ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.
ಹೊಸಕೋಟೆ.